# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆಸಂಖ್ಯೆ | : | 1359 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.03.2026 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜಾರಿಗೆ ತರಲು ಉದ್ದೇಶಿಸಿರುವ ಕೆಪಿಎಸ್ ಮ್ಯಾಗ್ನೆಟ್ ಯೋಜನೆಯ (KPS Magnet Scheme) ಉದ್ದೇಶ ಮತ್ತು ಸ್ವರೂಪವೇನು; ಈ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ಎಡಿಬಿಯಿಂದ (ADB) ಪಡೆದಿರುವ ಸಾಲದ ಮೊತ್ತ ಎಷ್ಟು; ಮತ್ತು ಅದಕ್ಕಾಗಿ ವಿಧಿಸಲಾಗಿರುವ ಪ್ರಮುಖ ಷರತ್ತುಗಳೇನು; | ನಗರ ಪ್ರದೇಶ, ಗ್ರಾಮೀಣ ಹಾಗೂ ಹಿಂದುಳಿದ ಪ್ರದೇಶಗಳ ಸರ್ಕಾರಿ ಶಾಲೆಗಳನ್ನು ಒಂದೇ ಆವರಣ ಅಥವಾ ಒಂದೇ ಭೌಗೋಳಿಕ ಪ್ರದೇಶದಲ್ಲಿರುವ ಸರ್ಕಾರಿ ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳನ್ನು ಒಟ್ಟುಗೂಡಿಸಿ ಒಂದೇ ಸೂರಿನಡಿ ಪೂರ್ವ ಪ್ರಾಥಮಿಕದಿಂದ ಪದವಿ ಪೂರ್ವದವರೆಗೆ ಶಿಕ್ಷಣ ನೀಡುವ ದೃಷ್ಟಿಯಿಂದ ಕೆ.ಪಿ.ಎಸ್ ಶಾಲೆಗಳಾಗಿ ಉನ್ನತೀಕರಿಸಲಾಗುತ್ತಿದ್ದು, ಕೆ.ಪಿ.ಎಸ್ ಶಾಲೆಗಳನ್ನಾಗಿ ಉನ್ನತೀಕರಿಸಲು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ.<br><br>ಒಂದೇ ಆವರಣ ಅಥವಾ ಒಂದೇ ಭೌಗೋಳಿಕ ಪ್ರದೇಶದಲ್ಲಿ ಸರ್ಕಾರಿ ಪ್ರಾಥಮಿಕ, ಪ್ರೌಢ ಮತ್ತು ಪದವಿ ಪೂರ್ವ ವಿಭಾಗಗಳು ಲಭ್ಯವಿರಬೇಕು.<br><br>ಒಟ್ಟಾರೆ ಕನಿಷ್ಟ 500 ವಿದ್ಯಾರ್ಥಿಗಳ ದಾಖಲಾತಿ ಇರಬೇಕು.<br><br>ಕನಿಷ್ಟ 01 ರಿಂದ 05 ಎಕರೆ ಸ್ಥಳಾವಕಾಶ ಹೊಂದಿರಬೇಕು.<br><br>ಈಗಾಗಲೇ ಕೆ.ಪಿ.ಎಸ್ ಶಾಲೆಗಳು ಇರುವ ಪ್ರದೇಶವನ್ನು ಹೊರತು ಪಡಿಸಿ ಇತರೆ ಗ್ರಾಮ/ಪಟ್ಟಣಗಳನ್ನು ಪರಿಗಣಿಸಲಾಗುವುದು.<br><br>ಕನಿಷ್ಟ 1200 ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲು ಮೂಲ ಸೌಕರ್ಯಗಳನ್ನು ಒದಗಿಸಲು ಸ್ಥಳಾವಕಾಶ ಹೊಂದಿರಬೇಕು.<br><br>ಈ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ಎ.ಡಿ.ಬಿ (A.D.B) ಯಿಂದ ರೂ.1750 ಕೋಟಿಗಳ ಆರ್ಥಿಕ ಸಹಾಯ ಕೋರಿರುವ ಪ್ರಸ್ತಾವನೆ ವಿವಿಧ ಹಂತಗಳಲ್ಲಿ ಅನುಷ್ಠಾನದಲ್ಲಿದೆ. |
| ಆ) | ಈ ಯೋಜನೆಯ ಅಡಿಯಲ್ಲಿ ರಾಜ್ಯದ ಸುಮಾರು 40 ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚಲು ಅಥವಾ ವಿಲೀನಗೊಳಿಸಲು ಸರ್ಕಾರ ಮುಂದಾಗಿರುವುದು ನಿಜವೇ; ಹಾಗಿದ್ದಲ್ಲಿ ಈ ಕ್ರಮದಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶಿಕ್ಷಣದ ಮೇಲೆ ಉಂಟಾಗುವ ಪರಿಣಾಮಗಳ ಬಗ್ಗೆ ಸರ್ಕಾರವು ಅಧ್ಯಯನ ನಡೆಸಿದೆಯೇ: (ವಿವರ ನೀಡುವುದು) | ರಾಜ್ಯದ ಯಾವುದೇ ಸರ್ಕಾರಿ ಶಾಲೆಗಳನ್ನು ಮುಚ್ಚಲು ಸರ್ಕಾರ ಮುಂದಾಗಿರುವುದಿಲ್ಲ, ಆದುದರಿಂದ ಪ್ರಶ್ನೆ ಉದ್ಭವಿಸಿರುವುದಿಲ್ಲ. |

| | | |
|---|---|---|
| ಇ) | ಪ್ರಾಯೋಗಿಕವಾಗಿ 'ವಿಲೀನ' ಪ್ರಕ್ರಿಯೆಯ ಮೂಲಕ ಶಾಲೆಗಳನ್ನು ಸ್ಥಗಿತಗೊಳಿಸುತ್ತಿರುವ ಬಗ್ಗೆ ಶಿಕ್ಷಣ ತಜ್ಞರು ವ್ಯಕ್ತಪಡಿಸಿರುವ ಆತಂಕಕ್ಕೆ ಸರ್ಕಾರದ ಸ್ಪಷ್ಟನೆ ಏನು; | ಪ್ರಶ್ನೆ ಉದ್ಭವಿಸಿರುವುದಿಲ್ಲ. |
| ಈ) | ಈ ಯೋಜನೆಯು ಕಾರ್ಪೊರೇಟ್ ಹಿತಾಸಕ್ತಿಗೆ ಪೂರಕವಾಗಿದೆ ಎಂಬ ಆರೋಪಗಳ ಹಿನ್ನೆಲೆಯಲ್ಲಿ ಈ ಯೋಜನೆಯನ್ನು ಹಿಂಪಡೆಯಲು ಹಾಗೂ ಬರುವ ಬಜೆಟ್ ನಲ್ಲಿ ಈ ಬಗ್ಗೆ ಅಧಿಕೃತವಾಗಿ ಘೋಷಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ? | ಯೋಜನೆ ಹಿಂಪಡೆಯುವ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಸಂಖ್ಯೆ:ಇಪಿ 84 ಯೋಸಕ 2026

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು